# ಕುವೆಂಪು ವಿಶ್ವವಿದ್ಯಾಲಯ
## ವಿಶ್ವವಿದ್ಯಾಲಯ ಕಾರ್ಯಾಲಯ

ಜ್ಞಾನ ಸಹ್ಯಾದ್ರಿ,
ಶಂಕರಘಟ್ಟ–577 451

---

ಸಂಖ್ಯೆ:ಕುವಿ: 100 :2022–23. ದಿನಾಂಕ:11–07–2022.

## ಸುತ್ತೋಲೆ

ವಿಷಯ: "ಹರ್ ಘರ್ ತಿರಂಗಾ" ಅಭಿಯಾನ ಕುರಿತು.
ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ:ಇಡಿ:99:ಯುಎನ್ಇ:2021:ದಿ:02–07–2022.

----

ದೇಶಾದ್ಯಂತ ಭಾರತ ಸ್ವಾತಂತ್ರ್ಯದ 75ರ ಸಂಭ್ರಮವನ್ನು ವೈವಿಧ್ಯಮಯವಾಗಿ ಆಚರಿಸುವ ಸಲುವಾಗಿ ಕೇಂದ್ರ ಸರ್ಕಾರವು "ಹರ್ ಘರ್ ತಿರಂಗಾ" ಎಂಬ ಘೋಷವಾಕ್ಯದೊಂದಿಗೆ 2022ರ ಆಗಸ್ಟ್ 11 ರಿಂದ 17ರವರೆಗೆ ದೇಶದ ಪ್ರತಿ ಮನೆ ಮನೆಯಲ್ಲೂ ರಾಷ್ಟ್ರ ಧ್ವಜವನ್ನು ಹಾರಿಸಿ ದೇಶ ಭಕ್ತಿ ಬಿಂಬಿಸುವ ಮೂಲಕ ನಮ್ಮ ರಾಷ್ಟ್ರ ಪ್ರೇಮವನ್ನು ಅಭಿವ್ಯಕ್ತಗೊಳಿಸಿ ದಾಖಲಿಸುವಂತೆ ಕರೆ ನೀಡಿ ಅಭಿಯಾನವನ್ನು ಹಮ್ಮಿಕೊಂಡಿದೆ.

ಆದುದರಿಂದ ತಮ್ಮ ಕಾಲೇಜುಗಳಲ್ಲಿ ಈ ಬಗ್ಗೆ ವ್ಯಾಪಕ ಪ್ರಚಾರ ಮಾಡಿ ಅಭಿಯಾನವನ್ನು ಯಶಸ್ವಿಗೊಳಿಸಲು ತಿಳಿಸಲಾಗಿದೆ. ಈ ಸಂಬಂಧ ಕೇಂದ್ರ ಸರಕಾರದ amritmahotsav.nic.in ಜಾಲತಾಣದಲ್ಲಿ "ಹರ್ ಘರ್ ತಿರಂಗಾ"ದ ಅಡಿಯಲ್ಲಿ ರಾಷ್ಟ್ರ ಧ್ವಜಕ್ಕೆ ಸಂಬಂಧಿಸಿದಂತೆ, ಬ್ಯಾನರ್ ಮತ್ತು ಪೋಸ್ಟರ್‌ಗಳ ಮಾದರಿಗಳು ಲಭ್ಯವಿದ್ದು ಅವುಗಳ ಉಪಯೋಗವನ್ನು ಪಡೆದುಕೊಳ್ಳುವಂತೆಯೂ ಮತ್ತು ಸದರಿ ಅಭಿಯಾನವನ್ನು ಯಶಸ್ವಿಗೊಳಿಸಲು ದಿನಾಂಕ:11–08–2022ರಿಂದ 17–08–2022ರವರೆಗೆ ಬೋಧಕರು/ ಬೋಧಕೇತರರು/ ವಿದ್ಯಾರ್ಥಿಗಳು ತಮ್ಮ ತಮ್ಮ ಮನೆಯ ಮೇಲೆ ರಾಷ್ಟ್ರಧ್ವಜವನ್ನು ಕುಟುಂಬದೊಂದಿಗೆ ಧ್ವಜಾರೋಹಣ ಮಾಡುವಂತೆ ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಪ್ರತಿ ತರಗತಿಗಳು ನಡೆಯುವ ಸಮಯದಲ್ಲಿ ತಿಳಿಸುವುದು ಮತ್ತು ಅಭಿಯಾನ ಕುರಿತು ಕೈಗೊಂಡ ಕ್ರಮದ ಬಗ್ಗೆ ಪ್ರತಿ ವಾರದ ಕೊನೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವೆಬ್ ಸೈಟ್ kanbhavblr@gmail.comಗೆ ಅಪ್‌ಲೋಡ್ ಮಾಡುವಂತೆ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಸರಕಾರದ ಸುತ್ತೋಲೆಯನ್ನು ಈ ಪತ್ರದೊಂದಿಗೆ ಲಗತ್ತಿಸಿದೆ.

**ಸೂಚನೆ:ಕಡ್ಡಾಯವಾಗಿ ರಾಷ್ಟ್ರಧ್ವಜಕ್ಕೆ ಸಂಬಂಧಿಸಿದ ಶಿಷ್ಟಾಚಾರವನ್ನು ಪಾಲಿಸುವುದು.**

ಕುಲಸಚಿವರು

ಕುಲಸಚಿವ
ಕುವೆಂಪು ವಿಶ್ವವಿದ್ಯಾಲಯ,
ಜ್ಞಾನಸಹ್ಯಾದ್ರಿ, ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ, ಕರ್ನಾಟಕ.

ಗೆ,
ವಿಶ್ವವಿದ್ಯಾಲಯದ ಎಲ್ಲಾ ಸ್ನಾತಕ/ಸ್ನಾತಕೋತ್ತರ/ಘಟಕ/ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರು/ವಿಭಾಗಾಧ್ಯಕ್ಷರುಗಳಿಗೆ
ಕುವೆಂಪು ವಿಶ್ವವಿದ್ಯಾಲಯ, ಜ್ಞಾನ ಸಹ್ಯಾದ್ರಿ, ಶಂಕರಘಟ್ಟ/ಕಡೂರು/ಚಿಕ್ಕಮಗಳೂರು/ಶಿವಮೊಗ್ಗ.

ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 99 ಯುಎನ್‌ಇ 2021

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 02.07.2022

<u>ಸುತ್ತೋಲೆ</u>

ಅಸಂಖ್ಯಾತ ಹೋರಾಟ, ತ್ಯಾಗ, ಬಲಿದಾನಗಳ ಕಾರಣದಿಂದ ದಾಸ್ಯದ ಸಂಕೋಲೆಯಿಂದ ಬಿಡುಗಡೆಯಾದ ಭಾರತಾಂಬೆಗೆ ಪ್ರಾಪ್ತಿಯಾದ ಸ್ವತಂತ್ರ್ಯಕ್ಕೆ ಈಗ ಅಮೃತ್ ಮಹೋತ್ಸವ ಸಂಭ್ರಮ. ಈ ಸಂದರ್ಭದಲ್ಲಿ ಅದಕ್ಕೆ ಕಾರಣರಾದ ಎಲ್ಲರನ್ನು ಸದಾ ಸ್ಮರಿಸುವುದು ಹಾಗೂ ಗೌರವಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. "ಇತಿಹಾಸ ಮರೆತವರು ಇತಿಹಾಸ ಸೃಷ್ಟಿಸಲಾರರು" ಎಂಬ ಮಾತಿನಂತೆ ಇಂದಿನ ನಮ್ಮ ಸಂಭ್ರಮಕ್ಕೆ ತಳಪಾಯವಾಗಿ, ಮೆಟ್ಟಿಲುಗಳಾಗಿ ತಮ್ಮ ಜೀವ-ಜೀವನ ತ್ಯಾಗ ಮಾಡಿದ ಎಲ್ಲರನ್ನು ಮರೆಯದೇ ಸದಾ ಸ್ಮರಿಸುತ್ತಾ ಭವ್ಯ ಭಾರತವನ್ನು ಕಟ್ಟುವಲ್ಲಿ ನಮ್ಮ ಜವಾಬ್ದಾರಿಯುತ ಪಾತ್ರವನ್ನು ನಿರ್ವಹಿಸಬೇಕಾಗಿದೆ.

ದೇಶಾದ್ಯಂತ ಭಾರತ ಸ್ವಾತಂತ್ರ್ಯದ 75 ರ ಸಂಭ್ರಮವನ್ನು ವೈವಿಧ್ಯಮಯವಾಗಿ ಆಚರಿಸಲಾಗುತ್ತಿದೆ. ಈ ಸಂಭ್ರಮದ ಒಂದು ಭಾಗವಾಗಿ ಕೇಂದ್ರ ಸರ್ಕಾರವು "ಹರ್ ಘರ್ ತಿರಂಗಾ" ಎಂಬ ಘೋಷವಾಕ್ಯದೊಂದಿಗೆ 2022ರ ಆಗಸ್ಟ್ 11 ರಿಂದ 17ರ ವರೆಗೆ ದೇಶದ ಪ್ರತಿ ಮನೆಮನೆಯಲ್ಲೂ ರಾಷ್ಟ್ರ ಧ್ವಜವನ್ನು ಹಾರಿಸಿ, ದೇಶ ಭಕ್ತಿ ಬಿಂಬಿಸುವ ಮೂಲಕ ನಮ್ಮ ರಾಷ್ಟ್ರ ಪ್ರೇಮವನ್ನು ಅಭಿವ್ಯಕ್ತಗೊಳಿಸಿ ದಾಖಲಿಸುವಂತೆ ಕರೆ ನೀಡಿ ಅಭಿಯಾನವನ್ನು ಹಮ್ಮಿಕೊಂಡಿದೆ.

ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ತಿಳಿಸಿದಂತೆ, ಸ್ವಾತಂತ್ರ್ಯದ ಅಮೃತ್ ಮಹೋತ್ಸವ "ಹರ್ ಘರ್ ತಿರಂಗಾ" ಅಭಿಯಾನವನ್ನು ಪ್ರಾರಂಭಿಸುವ ಬಗ್ಗೆ ಪ್ರಸ್ತಾಪಿಸಿದ್ದು, ಸದರಿ ಅಭಿಯಾನದಲ್ಲಿ ರಾಜ್ಯ ಸರ್ಕಾರದ ಶಾಲಾ / ಕಾಲೇಜು ಮಕ್ಕಳು / ಇತರೆ ಎಲ್ಲಾ ಸಿಬ್ಬಂದಿಗಳು ಹಾಗೂ ಅವರ ಕುಟುಂಬ ವರ್ಗದವರನ್ನು ಸೇರಿ ಕ್ರಿಯಾಶೀಲರಾಗಿ ಭಾಗವಹಿಸುವಂತೆ ಪ್ರೇರೇಪಿಸಬೇಕೆಂದು ಹಾಗೂ "ಹರ್ ಘರ್ ತಿರಂಗಾ" ಕಾರ್ಯಕ್ರಮಕ್ಕೆ ಸಂಬಂಧಿಸಿದ ಸ್ಥಳೀಯ ಭಾಷೆಯಲ್ಲಿ ಸ್ಟ್ಯಾಂಡಿಸ್, ಕರಪತ್ರ, ಬ್ಯಾನರ್ ಇತ್ಯಾದಿಗಳನ್ನು ಪ್ರಮುಖ ಸ್ಥಳಗಳಲ್ಲಿ ಬಿತ್ತರಿಸುವುದು, ರಾಜ್ಯ ಸರ್ಕಾರದ ವೆಬ್ ಸೈಟ್ ಹಾಗೂ ಸಾಮಾಜಿಕ ಮಾಧ್ಯಮಗಳ ಅಂಗಗಳನ್ನು ಉಪಯೋಗಿಸಿಕೊಳ್ಳುವುದು, ಮಹಲುಗಳು, ರೈಲು ನಿಲ್ದಾಣ, ಬಸ್ ನಿಲ್ದಾಣ, ಉದ್ಯಾನಗಳು, ಹೋಟೇಲುಗಳು ಅಲ್ಲದೆ ಪ್ರತಿ ವಾರ್ಡುಗಳಲ್ಲಿ ಸಾರ್ವಜನಿಕ ಸಂಪರ್ಕ ಹೊಂದಿರುವ ಕಚೇರಿಗಳ ಮುಂದೆ ವ್ಯಾಪಕ ಪ್ರಚಾರ ಮಾಡಲು ಸೂಕ್ತ ಕ್ರಮವಹಿಸುವಂತೆ ತಿಳಿಸಲಾಗಿರುತ್ತದೆ.

ಕೇಂದ್ರ ಸರ್ಕಾರದ ಜಾಲತಾಣದಲ್ಲಿ (amritmahotsav.nic.in) "ಹರ್ ಘರ್ ತಿರಂಗಾ"ದ ಅಡಿಯಲ್ಲಿ ರಾಷ್ಟ್ರ ಧ್ವಜಕ್ಕೆ ಸಂಬಂಧಿಸಿದಂತೆ, ಬ್ಯಾನರ್ ಮತ್ತು ಪೋಸ್ಟರ್ ಗಳ ಮಾದರಿಗಳು (Creatives) ಲಭ್ಯವಿದ್ದು, ಅವುಗಳ ಉಪಯೋಗವನ್ನು ಪಡೆದುಕೊಳ್ಳುವಂತೆಯೂ ಮತ್ತು ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಎಲ್ಲಾ ವಿಶ್ವವಿದ್ಯಾಲಯಗಳು, ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಸರ್ಕಾರಿ, ಅನುದಾನಿತ / ಅನುದಾನ ರಹಿತ ಪದವಿ ಕಾಲೇಜುಗಳು, ಡಿಪ್ಲೋಮೊ ಕಾಲೇಜುಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಮತ್ತು ಸದರಿ ಅಭಿಯಾನವನ್ನು ಯಶಸ್ವಿಗೊಳಿಸಲು ಮತ್ತು "ಹರ್ ಘರ್ ತಿರಂಗಾ" ಅಭಿಯಾನ ಕುರಿತು ದಿನಾಂಕ: 11.08.2022 ರಿಂದ ದಿನಾಂಕ:17.08.2022 ರವರೆಗೆ ಬೋಧಕರು /

ಬೋಧಕೇತರರು / ವಿದ್ಯಾರ್ಥಿಗಳು ತಮ್ಮ ತಮ್ಮ ಮನೆಯ ಮೇಲೆ ರಾಷ್ಟ್ರಧ್ವಜವನ್ನು ಕುಟುಂಬದೊಂದಿಗೆ ಧ್ವಜಾರೋಹಣ ಮಾಡುವಂತೆ ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಪ್ರತಿ ತರಗತಿಗಳು ನಡೆಯುವ ಸಮಯದಲ್ಲಿ ತಿಳಿಸುವುದು ಮತ್ತು ಸೂಚನಾ ಫಲಕಗಳಲ್ಲಿ ಈ ಕುರಿತು ಅಳವಡಿಸುವುದು. ಆಯಾ ಕಾಲೇಜುಗಳ ಖಾಸಗಿ ವಾಹನ / ಬಸ್ಸುಗಳ ಮೇಲೆ ಧ್ವಜವನ್ನು ಅಳವಡಿಸಲು ಸಂಸ್ಥೆಯ ಮುಖ್ಯಸ್ಥರು ಹಾಗೂ ಚಾಲಕರಿಗೆ ಅರಿವು ಮೂಡಿಸಲು ಸೂಕ್ತ ಕ್ರಮವಹಿಸುವಂತೆ ಹಾಗೂ **"ಹರ್ ಘರ್ ತಿರಂಗಾ"** ಅಭಿಯಾನ ಕುರಿತು ಕೈಗೊಂಡ ಕ್ರಮದ ಬಗ್ಗೆ ಪ್ರತಿ ವಾರದ ಕೊನೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವೆಬ್‌ಸೈಟ್ kanbhavblr@gmail.com ಗೆ ಅಪಲೋಡ್ ಮಾಡುವಂತೆಯೂ ಹಾಗೂ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಎಲ್ಲಾ ವಿಶ್ವವಿದ್ಯಾಲಯಗಳು, ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಸರ್ಕಾರಿ / ಅನುದಾನಿತ / ಅನುದಾನ ರಹಿತ ಪದವಿ ಕಾಲೇಜುಗಳು, ಡಿಪ್ಲೊಮೊ ಕಾಲೇಜುಗಳಿಗೆ ಈ ಕಾರ್ಯವನ್ನು ಯಶಸ್ವಿಗೊಳಿಸುವಂತೆ ತಿಳಿಸಿದೆ.

**(ಶೀತಲ್ ಎಂ ಹಿರೇಮಠ)**
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-1)

**ಇವರಿಗೆ,**

1. ಆಯುಕ್ತರು, ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ – ಇವರ ಮೂಲಕ ಸರ್ಕಾರಿ ಅನುದಾನಿತ / ಅನುದಾನ ರಹಿತ ಪದವಿ / ಡಿಪ್ಲೋಮೊ ಕಾಲೇಜುಗಳ ಪ್ರಾಂಶುಪಾಲರಿಗೆ.
2. ಕುಲಸಚಿವರು, ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಗೊಳಪಡುವ ಎಲ್ಲಾ ವಿಶ್ವವಿದ್ಯಾಲಯಳು- ಇವರ ಮೂಲಕ ಸಂಬಂಧಿಸಿದ ಸಂಯೋಜಿತ ಕಾಲೇಜುಗಳಿಗೆ.
3. ಎಲ್ಲಾ ಖಾಸಗಿ ವಿಶ್ವವಿದ್ಯಾಲಯಗಳ ಕುಲಸಚಿವರುಗಳಿಗೆ.
4. ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಎಲ್ಲಾ ಕಾಲೇಜುಗಳು.

**ಪ್ರತಿ ಮಾಹಿತಿಗಾಗಿ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಸ್ವಾತಂತ್ರ್ಯ ಅಮೃತ ಮಹೋತ್ಸವದ ಉನ್ನತ ಮಟ್ಟದ ಸಮಿತಿ ಅಧ್ಯಕ್ಷರ ಆಪ್ತ ಕಾರ್ಯದರ್ಶಿ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು.
5. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವಿಶ್ವವಿದ್ಯಾಲಯ & ಸಮನ್ವಯ, ಉನ್ನತ ಶಿಕ್ಷಣ ಇಲಾಖೆ.
6. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕಾಲೇಜು ಶಿಕ್ಷಣ, ಉನ್ನತ ಶಿಕ್ಷಣ ಇಲಾಖೆ.
7. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ತಾಂತ್ರಿಕ ಶಿಕ್ಷಣ, ಉನ್ನತ ಶಿಕ್ಷಣ ಇಲಾಖೆ.